ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

5

ಶಾಖೆ / ವಿಷಯ : DEPARTMENT / SUBJECT: ಗೃಹ - CD - ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE 5/4/21

# ಸಿಡಿ ಲೇಡಿ ಗೊತ್ತಿಲ್ಲ

5/4/21

ಚಿತ್ರದುರ್ಗ: ಸಿಡಿ ಲೇಡಿ ಪ್ರಕರಣದಲ್ಲಿ ಮಾಜಿ ಸಚಿವ ಡಿ.ಸುಧಾಕರ್ ಹೆಸರು ಕೇಳಿ ಬಂದಿದ್ದು ಇದನ್ನು ಸ್ವತ: ಸುಧಾಕರ್ ಅವರೇ ನಿರಾಕರಿಸಿದ್ದಾರೆ.

ನಮ್ಮದು ಸ್ವಾತಂತ್ರ್ಯ ಹೋರಾಟಗಾರರ ವಂಶ. ಸಿಡಿ ಲೇಡಿ ತಮಗೆ ಗೊತ್ತಿಲ್ಲ. ಎಸ್‌ಐಟಿಯಿಂದ ತಮಗೆ ಯಾವುದೇ ನೋಟಿಸ್ ಬಂದಿಲ್ಲ. ಬಂದರೆ ಉತ್ತರ ಕೊಡುವುದಾಗಿ ಮಾಜಿ ಸಚಿವ ಡಿ.ಸುಧಾಕರ್ ಹೇಳಿದ್ದಾರೆ.



ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿ, ಮಾಜಿ ಸಚಿವ ರಮೇಶ ಜಾರಕಿಹೊಳಿ ಅವರಿಗೆ ಸಂಬಂಧಿಸಿದ್ದು ಎನ್ನಲಾದ ಸಿ.ಡಿ ಹಗರಣದಲ್ಲಿ ನನ್ನ ಹೆಸರು ತಳಕು ಹಾಕಿ ಕೊಂಡಿದ್ದು ಆಶ್ಚರ್ಯವಾಗಿದೆ. ನನಗೂ ಹಾಗೂ ಸಿ.ಡಿ.ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲ. ರಾಜ್ಯದಲ್ಲಿನ ಬಿಜೆಪಿ ಸರ್ಕಾರದಲ್ಲಿನ ಮಂತ್ರಿ .ಪದವಿಯನ್ನು ಕಿತ್ತು ಕೊಂಡಂತಹ ಸಿಡಿ ಲೇಡಿ ಪ್ರಕರಣದಲ್ಲಿ ನನ್ನ ಹೆಸರು ಪ್ರಸ್ತಾಪವಾಗಿರುವದಕ್ಕೆ ಅಚ್ಚರಿ ಯಾಗಿದೆ. ಸಿಡಿ ಪ್ರಕರಣದಲ್ಲಿ ನನ್ನ ಪಾತ್ರವಿಲ್ಲ ಎಂದು ಸ್ಪಷ್ಟನೆ ನೀಡಿದರು.

ನನಗೂ ಸಿಡಿ ಲೇಡಿಗೂ ಯಾವುದೇ ಸಂಬಂಧವಿಲ್ಲ. ನನ್ನ ಹೆಸರು ಮಾಧ್ಯಮದಲ್ಲಿ ಪ್ರಸ್ತಾಪಿಸಿರುವುದು ಅಚ್ಚರಿ ಮೂಡಿಸಿದೆ.

ನಾನು ಜನಪ್ರತಿನಿಧಿ. ನನಗೆ ಪ್ರತಿದಿನ ನೂರಾರು ಜನರು ಫೋನ್ ಮಾಡುತ್ತಾರೆ. ಅದರಲ್ಲಿ ಆ ಹುಡುಗಿ ಯಾರು ಎಂದು ನನಗೆ ಗೊತ್ತಿಲ್ಲ. "ನನ್ನ ತಂದೆ ಸ್ವಾತಂತ್ರ್ಯ ಹೋರಾಟಕ್ಕಾಗಿ ಜೈಲಿಗೆ ಹೋಗಿ ಬಂದವರು. ಅಂತಹ ಕುಟುಂಬ ದಿಂದ ನಾನು ಬಂದಿದ್ದೇನೆ. ನನ್ನ ಹೆಸರು ಮಾಧ್ಯಮದಲ್ಲಿ ಪ್ರಸ್ತಾಪಿಸಿರುವುದು ಅಚ್ಚರಿ ಮೂಡಿಸಿದೆ ಎಂದು ಹೇಳಿದರು.

ಸಿಡಿ ಲೇಡಿ ಬ್ಯಾಂಕ್ ಖಾತೆಗೆ ಹಣ ವರ್ಗಾವಣೆ ಆಗಿರುವ ಕುರಿತು ಪ್ರತಿಕ್ರಿಯಿಸಿ, ಸಿಡಿ ಲೇಡಿ ಯಾರು ಎಂಬುದೇ ನನಗೆ ಗೊತ್ತಿಲ್ಲ. ಹೀಗಿರುವಾಗ ನಾನು ಏಕೆ ಹಣ ಕಳುಹಿಸಲಿ. ಯಾರಿಗೂ 10 ರೂಪಾಯಿನೂ ಹಣ ವರ್ಗಾವಣೆ ಮಾಡಿಲ್ಲ. ನನಗೆ ಸಿಡಿ ಸಂತ್ರಸ್ತ ಯುವತಿಯೊಂದಿಗೆ ಸಂಪರ್ಕ ಇದ್ದಿದ್ದರೆ ಇಷ್ಟೊತ್ತಿಗೆ ಇಂಜೆಕ್ಷನ್ ಆರ್ಡರ್ ಪಡೆಯುತ್ತಿದ್ದೆ. ಆದರೆ ಆ ರೀತಿಯ ಯಾವುದೇ ಸಂಬಂಧವಿಲ್ಲ. ಈ ಪ್ರಕರಣ ಕುರಿತಂತೆ ಎಸ್‌ಐಟಿ ಅಧಿಕಾರಿಗಳು ವಿಚಾರಣೆಗೆ ಕರೆದರೆ ತೆರಳುತ್ತೇನೆ. ಆ ಬಗ್ಗೆ ವಿಚಾರಣೆಗೆ ಹಾಜರಾಗಿ ಮಾಹಿತಿ ನೀಡುವುದಾಗಿಯೂ ತಿಳಿಸಿದರು.

ಎಸ್‌ಐಟಿಯಿಂದ ತಮಗೆ ಯಾವುದೇ ನೋಟಿಸ್ ನೀಡಿಲ್ಲ. ಹಾಗೇನಾದರೂ ನೋಟಿಸ್ ನೀಡಿದಲ್ಲಿ ವಿಚಾರಣೆಗೆ ಹೋಗಲು ನಾನು ಸಿದ್ಧ. ನಿತ್ಯ ಅನೇಕ ಜನರು ಕರೆ ಮಾಡುತ್ತಿರುತ್ತಾರೆ. ಯಾರು ಕರೆ ಮಾಡಿದ್ದಾರೆ ಎಂಬುದು ಅನೇಕ ಬಾರಿ ಗೊತ್ತಾಗದು. ನನಗೆ ಭಯ ಇದ್ದಿದ್ದರೆ ಮೊದಲೇ ನ್ಯಾಯಾಲಯದ ಮೊರೆ ಹೋಗುತ್ತಿದ್ದೆ. ಕೆಪಿಸಿಸಿ ಅಧ್ಯಕ್ಷ ಡಿ. ಕೆ.ಶಿವಕುಮಾರ್ ಹಾಗೂ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಅವರೊಂದಿಗೆ ಹೆಚ್ಚು ಸಂಪರ್ಕ ಹೊಂದಿರುವ ಕಾರಣಕ್ಕೆ ಇಂತಹ ಪ್ರಕರಣದಲ್ಲಿ ಸಿಲುಕಿಸಲು ಪ್ರಯತ್ನಿಸಿರಬಹುದು ಎಂದು ಹೇಳಿದರು.